# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಅ.ವಿ:2023-24 / 275 ದಿನಾಂಕ:15.09.2023

**: ಬಿಡುಗಡೆ ಆದೇಶ :**

ವಿಷಯ: 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿಯ ವಿವಿಧ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿರುವ ಕುರಿತು.

ಉಲ್ಲೇಖ: 1. ವಿ.ವಿ.ಪರಿಷ್ಕೃತ ಅಧಿಸೂಚನೆ ಸಂಖ್ಯೆ:ತುವಿ:ಶೈವಿ:PG:2022-23/4847 ದಿನಾಂಕ:11.01.2023

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:15.09.2023

* * * * *

ತುಮಕೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳಿಗೆ 2022-23ನೇ ಶೈಕ್ಷಣಿಕ ಸಾಲಿಗೆ ಪೂರ್ಣಕಾಲಿಕ ಮತ್ತು ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲಾಗಿತ್ತು. ವಿಶ್ವವಿದ್ಯಾನಿಲಯದ ಉಲ್ಲೇಖ(1) ರ ಅಧಿಸೂಚನೆಯನ್ವಯ ಸ್ನಾತಕೋತ್ತರ ಪದವಿ ತರಗತಿಗಳು ದಿನಾಂಕ:16.09.2023 ರಂದು ಮುಕ್ತಾಯಗೊಳ್ಳಲಿವೆ.

ತತ್ಸಂಬಂಧ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಸ್ನಾತಕೋತ್ತರ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ದಿನಾಂಕ:16.09.2023 ರ ಅಪರಾಹ್ನ ಕರ್ತವ್ಯದಿಂದ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಮುಂದುವರೆದು, ಅತಿಥಿ ಉಪನ್ಯಾಸಕರು ವಿಭಾಗದ ಮುಖ್ಯಸ್ಥರ ಮುಖಾಂತರ ಲಿಖಿತ ಮನವಿ ಹಾಗೂ ಗ್ರಂಥಾಲಯ ಬೇಬಾಕಿ ಪತ್ರವನ್ನು ಸಲ್ಲಿಸಿ ಕಚೇರಿಯಿಂದ ಮೂಲ ದಾಖಲೆಗಳನ್ನು ಹಿಂಪಡೆಯುವಂತೆ ತಿಳಿಸಲಾಗಿದೆ.

ಆದೇಶದ ಮೇರೆಗೆ

Mangalahouri M.

ಉಪಕುಲಸಚಿವರು

ಉಪಕುಲಸಚಿವರು

ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ

1. ಅಧ್ಯಕ್ಷರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತು.ವಿ.ತು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.
4. ಸಂಯೋಜಕರು, ತಿಪಟೂರು ಸ್ನಾತಕೋತ್ತರ ಕೇಂದ್ರ, ತಿಪಟೂರು.
5. ಸಂಯೋಜಕರು, ಸಿರಾ ಸ್ನಾತಕೋತ್ತರ ಕೇಂದ್ರ, ಸಿರಾ.

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಚೇರಿ ಪ್ರತಿ

ಸಿಆರ್